ಅವರದೇ ಸರ್ಕಾರ ಕೇಂದ್ರ ಸರ್ಕಾರದಲಿದೆ. ನಾವು ತಪ್ಪು ಮಾಡಿದ್ದೇವೆ, ನೀರನ್ನು ಉಳಿಸಿಕೊಳ್ಳುವುದಕ್ಕಾಗಲಿಲ್ಲ. ಶ್ರೀ ಹೆಚ್.ಡಿ.ದೇವೇಗೌಡರು ಮಾನ್ಯ ಪ್ರಧಾನ ಮಂತ್ರಿಗಳಾಗಿ ನೀರನ್ನು ಉಳಿಸಿಕೊಳ್ಳುವುದಕ್ಕಾಗಲಿಲ್ಲ. ಈಗ ನೀವಿದ್ದೀರಿ, ನಿಮ್ಮದೇ ಸರ್ಕಾರವಿದೆ. ಏನಾದರೂ ಮಾಡಿ ನಮ್ಮ ಜನರನ್ನು ಉಳಿಸಿ ಎಂದು ಕೇಳಿಕೊಳ್ಳುವುದಕ್ಕೆ ಕೆಲವು ವಿಷಯಗಳನ್ನು ಹೇಳಬೇಕಾಗಿದೆ. ಅದನ್ನು ಊಟದ ನಂತರ ಹೇಳುತ್ತೇನೆ.

ಅಧ್ಯಕ್ಷರು : ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರು ಈ ದಿನ ಮಧ್ಯಾಹ್ನ 1.30 ಗಂಟೆಗೆ ಬ್ಯಾಂಕ್ವೆಟ್ ಹಾಲ್‌ನಲ್ಲಿ ಭೋಜನ ಕೂಟವನ್ನು ಏರ್ಪಡಿಸಿದ್ದು, ತಾವೆಲ್ಲರೂ ಪಾಲ್ಗೊಳ್ಳಬೇಕೆಂದು ಪ್ರಾರ್ಥನೆ ಮಾಡಿಕೊಂಡು ಈಗ ಸದನವನ್ನು ಮುಂದೂಡಿ ಪುನಃ 2.30 ಗಂಟೆಗೆ ಸೇರೋಣ.

(ಸಭೆಯನ್ನು ಮಧ್ಯಾಹ್ನ 1 ಗಂಟೆ 40 ನಿಮಿಷಕ್ಕೆ ಮುಂದೂಡಲಾಯಿತು)

(ಸದನವು ಪುನಃ ಮಧ್ಯಾಹ್ನ 2 ಗಂಟೆ 54 ನಿಮಿಷಕ್ಕೆ ಸಮಾವೇಶಗೊಂಡಿತು. ಸಭಾಧ್ಯಕ್ಷರಾದ ಶ್ರೀ ಕಾಗೋಡು ತಿಮ್ಮಪ್ಪ ರವರು ಅಧ್ಯಕ್ಷ ಪೀಠವನ್ನು ಅಲಂಕರಿಸಿದ್ದರು.)

ಶ್ರೀ ಹೆಚ್.ಡಿ.ಕುಮಾರಸ್ವಾಮಿ (ವಿರೋಧ ಪಕ್ಷದ ನಾಯಕರು): ಮಾನ್ಯ ಸಭಾಧ್ಯಕ್ಷರೆ, ಕಾವೇರಿ ಐತೀರ್ಪಿನ ಹಿನ್ನೆಲೆಯಲ್ಲಿ ಸದನದ ಗಮನವನ್ನು ಸೆಳೆಯುತ್ತಿದ್ದೇನೆ. ನಂತರ ಅದರ ಮುಂದುವರೆದ ಭಾಗವಾಗಿ ಯಾವ ರೀತಿ ಕಾವೇರಿ ಟ್ರಿಬ್ಯುನಲ್‌ನ ಛೇರ್‌ಮನ್ ಶ್ರೀ ಎನ್.ಪಿ.ಸಿಂಗ್‌ರವರು ರಾಜೀನಾಮೆ ಕೊಟ್ಟರು, ಅದರ ಹಿನ್ನೆಲೆಯಲ್ಲಿ 8ನೇ ಮಾರ್ಚ್ 2013ರಲ್ಲಿ ಮತ್ತೆ ಪ್ರಧಾನಮಂತ್ರಿಗಳ ಗಮನ ಸೆಳೆದಿದ್ದಾರೆ. ಅದರಲ್ಲಿ ನಾನು ಎಲ್ಲಾವಿಷಯಗಳನ್ನು ಚರ್ಚೆ ಮಾಡುವುದಕ್ಕೆ ಹೋದರೆ ಹೆಚ್ಚಿನ ಸಮಯ ತೆಗೆದುಕೊಳ್ಳಬೇಕಾಗುತ್ತದೆ. ಕೆಲವು ಪ್ರಮುಖವಾದ ಅಂಶಗಳನ್ನು ಸದನದ ಗಮನಕ್ಕೆ ತರುವುದಕ್ಕೆ ಬಯಸುತ್ತೇನೆ. "This brings the issue down to the moot question of what kind of Tribunal ought to answer the pending references made by the Union Government and the party states, a broken Tribunal made functional by filling the vacancy of the chairman or a tribunal in which people of all the party states can repose their faith and trust and unhesitatingly accept the wording. Just to give a